# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 932(1047) |
| ಸದಸ್ಯರ ಹೆಸರು | : | ಶ್ರೀ ಐವನ್ 'ಡಿ' ಸೋಜಾ (ವಿಧಾನ ಸಭೆಯಿಂದ ಚುನಾಯಿತರಾದವರು) |
| ದಿನಾಂಕ | : | 16.12.2025 |
| ಉತ್ತರಿಸುವ ಸಚಿವರು | : | ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಎಷ್ಟು ಜಾಹೀರಾತು ಫಲಕ ಅಧಿಕೃತವಾಗಿದೆ; ಎಷ್ಟು ಅನಧಿಕೃತವಾಗಿದೆ; ಯಾವ ಯಾವ ಸಂಸ್ಥೆಗಳಿಗೆ ಸೇರಿದ್ದು, ಇದರಿಂದ ಸಂಸ್ಥೆಯವರು ಸಂಪಾದಿಸುವ ಹಣವೆಷ್ಟು; (ವಿವರ ನೀಡುವುದು) | • ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಒಟ್ಟು 1084 ಜಾಹೀರಾತು ಫಲಕಗಳಿಗೆ ಅನುಮತಿ ನೀಡಲಾಗಿದ್ದು, ಅಧಿಕೃತವಾಗಿರುತ್ತವೆ.<br><br>• ಅನಧಿಕೃತವಾಗಿ ಜಾಹೀರಾತು ಫಲಕ ಅಳವಡಿಸಿರುವುದು ಕಂಡುಬಂದಲ್ಲಿ ನಿರಂತರ ಕಾರ್ಯಾಚರಣೆಯಲ್ಲಿ ತೆರವುಗೊಳಿಸಲಾಗುತ್ತಿದೆ.<br><br>• ಅಧಿಕೃತ ಫಲಕಗಳನ್ನು ಅಳವಡಿಸಿರುವ ಸಂಸ್ಥೆಗಳ ವಿವರ:<br>ಸಿಲಾ ಅಡ್ವರ್ಟೈಸರ್ಸ್ – 305<br>ಜೀಡೀ ಅಡ್ವರ್ಟೈಸರ್ಸ್ – 104<br>ಕಲ್ಕುರಾ ಅಡ್ವರ್ಟೈಸರ್ಸ್ – 206<br>ಜ್ಯೋತಿ ಅಡ್ವರ್ಟೈಸರ್ಸ್ – 155<br>ತಿರುಮಲ ಅಡ್ವರ್ಟೈಸರ್ಸ್ – 51<br>ಇತರೆ – 263 (ಏಜನ್ಸಿಯೇತರ Individuals)<br><br>• ಜಾಹೀರಾತು ಫಲಕಗಳನ್ನು ಅಳವಡಿಸಿದ ಸಂಸ್ಥೆಗಳು ಶುಲ್ಕವನ್ನು ಪಾಲಿಕೆಗೆ ಪಾವತಿಸುತ್ತಿದ್ದಾರೆ. ಈ ಸಂಸ್ಥೆಗಳು ಸಂಪಾದಿಸುವ ಹಣದ ಮಾಹಿತಿ ಇರುವುದಿಲ್ಲ. |
| ಆ) | ಮಂಗಳೂರು ಮಹಾನಗರಪಾಲಿಕೆ ವ್ಯಾಪ್ತಿಯಲ್ಲಿ ಅಧಿಕೃತಗಿಂತ ಅನಧಿಕೃತ ಫಲಕಗಳು ಜಾಸ್ತಿ ಇದ್ದು, ಇದರಿಂದ ಸರ್ಕಾರಕ್ಕೆ ದೊಡ್ಡ ರೀತಿ ಆರ್ಥಿಕ ನಷ್ಟ ಉಂಟಾಗಿದ್ದು, ಇದನ್ನು ಸರಿಪಡಿಸಲು ಇಲಾಖೆ ಕೈಗೊಂಡ ಕ್ರಮವೇನು? | ಮಂಗಳೂರು ಮಹಾನಗರಪಾಲಿಕೆ ವ್ಯಾಪ್ತಿಯಲ್ಲಿ ಅಧಿಕೃತ ಜಾಹೀರಾತು ಫಲಕಗಳಿಗೆ ನಿಗದಿತ ಶುಲ್ಕ ಪಾವತಿಸಿಕೊಂಡು ಅನುಮತಿ ನೀಡಲಾಗುತ್ತಿದೆ.<br><br>ಅನಧಿಕೃತ ಫಲಕಗಳು ಕಂಡು ಬಂದಲ್ಲಿ ಕೂಡಲೇ ತೆರವುಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ಇದರಿಂದ ಆರ್ಥಿಕ ನಷ್ಟ ಉಂಟಾಗಿರುವುದಿಲ್ಲ.<br><br>ಮಂಗಳೂರು ಮಹಾನಗರಪಾಲಿಕೆ ವ್ಯಾಪ್ತಿಯ ಖಾಸಗಿ ಮತ್ತು ಸಾರ್ವಜನಿಕ ಸ್ಥಳಗಳಲ್ಲಿ ಅಧಿಕೃತ ಮತ್ತು ಅನಧೀಕೃತ ಜಾಹೀರಾತು ಫಲಕಗಳ ಗುರುತುಸುವಿಕೆ ಹಾಗೂ ನಿಖರ ಮಾಹಿತಿಯನ್ನು ಕ್ರೋಢೀಕರಿಸುವ ಹಾಗೂ ಜಾಹೀರಾತು ಫಲಕಗಳ ಶುಲ್ಕ ಪಾವತಿ ಮಾಹಿತಿಗಾಗಿ ಜಿಯೋ ಟ್ಯಾಗಿಂಗ್ ತಂತ್ರಾಂಶವನ್ನು ಅಭಿವೃದ್ಧಿ ಪಡಿಸಲಾಗಿದ್ದು, ಮುಂದಿನ ದಿನಗಳಲ್ಲಿ ಕಾರ್ಯಗತ ಗೊಳಿಸಲಾಗುವುದು. |

| | | |
|---|---|---|
| ಇ) | ಈ ಆರ್ಥಿಕ ನಷ್ಟಕ್ಕೆ ಯಾರು ಹೊಣೆ; ಆರ್ಥಿಕ ನಷ್ಟ ಉಂಟುಮಾಡಿದವರ ಮೇಲೆ ವಸೂಲಿ ದಾಖಲಿಸಲಾಗಿದೆಯೇ: (ವಿವರ ನೀಡುವುದು) | ಅನಧಿಕೃತ ಫಲಕಗಳನ್ನು ತಕ್ಷಣ ತೆರವುಗೊಳಿಸುತ್ತಿರುವುದರಿಂದ ಪಾಲಿಕೆಗೆ ನಷ್ಟ ಉಂಟಾಗಿರುವುದಿಲ್ಲ.<br>ಕೇಸು ದಾಖಲಿಸುವ ಪ್ರಶ್ನೆ ಉದ್ಭವಿಸುವುದಿಲ್ಲ. |
| ಈ) | ಮಂಗಳೂರು ಮಹಾನಗರಪಾಲಿಕೆ ವ್ಯಾಪ್ತಿಯಲ್ಲಿ ಅನಧಿಕೃತ ಫಲಕ ಮಾಫೀಯಾ ಜೊತೆಗೆ ಅಧಿಕಾರಿಗಳು ಶಾಮೀಲಾಗಿರುವ ಬಗ್ಗೆ ದೂರುಗಳಿದ್ದು, ಈ ಬಗ್ಗೆ ಇಲಾಖೆ ಕೈಗೊಂಡಿರುವ ಕ್ರಮವೇನು? (ವಿವರ ನೀಡುವುದು) | ಯಾವುದೇ ದೂರುಗಳು ಬಂದಿರುವುದಿಲ್ಲ. ಈ ಬಗ್ಗೆ ದೂರುಗಳು ಬಂದಲ್ಲಿ ಸೂಕ್ತ ಕ್ರಮ ಕೈಗೊಳ್ಳಲಾಗುವುದು. |
| ಉ) | ಅನಧಿಕೃತ ಫಲಕಗಳನ್ನು ಯಾವಾಗ ತೆಗೆದು ಹಾಕಲಾಗುವುದು; ಈ ಬಗ್ಗೆ ಇಲಾಖೆಗೆ ಉಂಟಾದ ನಷ್ಟಗಳನ್ನು ಭರ್ತಿ ಮಾಡಿಕೊಳ್ಳಲು ಇಲಾಖೆ ಕೈಗೊಂಡ ಕ್ರಮವೇನು? (ವಿವರ ನೀಡುವುದು) | ಈಗಾಗಲೇ ಅಭಿವೃದ್ಧಿ ಪಡಿಸಲಾದ ತಂತ್ರಾಂಶ ಮೂಲಕ ಅನಧಿಕೃತ ಫಲಕಗಳ ಬಗ್ಗೆ ಸಮೀಕ್ಷೆ ನಡೆಸಿ ಅನಧಿಕೃತ ಫಲಕ ಎಂದು ಕಂಡುಬಂದಲ್ಲಿ ತಕ್ಷಣ ತೆರವುಗೊಳಿಸಲು ಕ್ರಮ ಕೈಗೊಳ್ಳಲಾಗುವುದು.<br><br>ಖಾಸಗಿ ಮತ್ತು ಸಾರ್ವಜನಿಕ ಸ್ಥಳಗಳಲ್ಲಿ ಅಧಿಕೃತ ಮತ್ತು ಅನಧೀಕೃತ ಜಾಹೀರಾತು ಫಲಕಗಳ ಗುರುತುಸುವಿಕೆ ಹಾಗೂ ನಿಖರ ಮಾಹಿತಿಯನ್ನು ಕ್ರೋಢೀಕರಿಸುವ ಹಾಗೂ ಜಾಹೀರಾತು ಫಲಕಗಳ ಶುಲ್ಕ ಪಾವತಿ ಮಾಹಿತಿಗಾಗಿ ಜಿಯೋ ಟ್ಯಾಗಿಂಗ್ ತಂತ್ರಾಂಶವನ್ನು ಅಭಿವೃದ್ಧಿ ಪಡಿಸಲಾಗಿದ್ದು, ಮುಂದಿನ ದಿನಗಳಲ್ಲಿ ಕಾರ್ಯಗತ ಗೊಳಿಸಲಾಗುವುದು. |

**ಸಂಖ್ಯೆ: ನಅಇ 79 ಎಂಎಂಸಿ 2025 (ಇ)**

**(ಬಿ.ಎಸ್.ಸುರೇಶ)**
ನಗರಾಭಿವೃದ್ಧಿ ಮತ್ತು ನಗರ ಯೋಜನೆ
ಸಚಿವರು